**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ**
**ಅಧಿಸೂಚನೆ**
**ಸಂಖ್ಯೆ: ಸಿಆಸುಇ 3 ಎಆರ್ ಬಿ 2019, ಬೆಂಗಳೂರು, ದಿನಾಂಕ:11.12.2019**

ಭಾರತ ಸಂವಿಧಾನದ 166ನೇ ಅನುಚ್ಛೇದದ ಕಲಮು (2) ಮತ್ತು (3) ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ರಾಜ್ಯಪಾಲರು, ಕರ್ನಾಟಕ (ಕೆಲಸಗಳ ಹಂಚಿಕೆ) ನಿಯಮಗಳು, 1977, ಇದಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಕೆಳಕಂಡ ನಿಯಮಗಳನ್ನು ಈ ಮೂಲಕ ರಚಿಸಿದ್ದಾರೆ. ಎಂದರೆ,-

1. **ಶೀರ್ಷಿಕೆ ಮತ್ತು ಪ್ರಾರಂಭ:-** 1) ಈ ನಿಯಮಗಳನ್ನು ಕರ್ನಾಟಕ ಸರ್ಕಾರ (ಕೆಲಸಗಳ ಹಂಚಿಕೆ) (ತಿದ್ದುಪಡಿ) ನಿಯಮಗಳು, 2019 ಎಂದು ಕರೆಯತಕ್ಕದ್ದು.

2) ಇವುಗಳು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ಅನುಸೂಚಿ IX ಕ್ಕೆ ತಿದ್ದುಪಡಿ:-** ಕರ್ನಾಟಕ ಸರ್ಕಾರ (ಕೆಲಸಗಳ ಹಂಚಿಕೆ) ನಿಯಮಗಳು, 1977ರ ಅನುಸೂಚಿ IX ರಲ್ಲಿ, "**ಒಳಾಡಳಿತ ಇಲಾಖೆ**" ಶೀರ್ಷಿಕೆ ಅಡಿಯಲ್ಲಿ, **"ಎ. ಬಂದೀಖಾನೆಗಳು"** ಉಪಶೀರ್ಷಿಕೆಗೆ **"ಎ. ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಇಲಾಖೆ"** ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

3.

ಸಹಿ/-
(ವಾಜುಬಾಯಿವಾಲಾ)
ಕರ್ನಾಟಕ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಚಂದ್ರಹಾಸ.ಗಂ.ತಾಳೂಕರ**
ಸರ್ಕಾರದ ಉಪ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)